ಇಲಾಖೆ / ವಿಷಯ : DEPARTMENT / SUBJECT: ಉಪಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE 29/3/2021

# ಕರಿ ದಿನವೇ ಸತೀಶ ಉಮೇದುವಾರಿಕೆ

**ಬೆಳಗಾವಿ:** ಬೆಳಗಾವಿ ಲೋಕಸಭೆ ಉಪ ಚುನಾವಣೆಗೆ ಸ್ಪರ್ಧಿಸುತ್ತಿರುವ ಕೆಪಿಪಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಮತ್ತೊಮ್ಮೆ ಮೌಢ್ಯಕ್ಕೆ ಸಡ್ಡು ಹೊಡೆಯಲು ಸಜ್ಜಾಗಿದ್ದು, ಶುಭ ಕಾರ್ಯಗಳಿಗೆ ಸೂಕ್ತವಲ್ಲ ಎಂಬ ವಾಡಿಕೆಯ 'ಕರಿ' ದಿನ (ಹೋಳಿ ಹುಣ್ಣಿಮೆಯ ಮರುದಿನ)ದಂದೇ



ಉಮೇದುವಾರಿಕೆ ಸಲ್ಲಿಸಲು ಸಿದ್ಧತೆ ನಡೆಸಿದ್ದಾರೆ. ಸೋಮವಾರ ಬೆಳಗ್ಗೆ 11ಕ್ಕೆ ನಾಮಪತ್ರ ಸಲ್ಲಿಸಲಿದ್ದು, ಹಿಂದಿನಂತೆಯೇ ಯಾವುದೇ ಆಡಂಬರ, ಮೆರವಣಿಗೆ ಮಾಡದೆ ಸರಳವಾಗಿ ಪಕ್ಷದ ಮುಖಂಡರೊಂದಿಗೆ ತೆರಳಿ ಸಲ್ಲಿಸಲು ನಿರ್ಧರಿಸಲಾಗಿದೆ. ಕೋವಿಡ್-19 ಮಾರ್ಗಸೂಚಿ ಪಾಲನೆ ಹಿನ್ನೆಲೆಯಲ್ಲಿ ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಾರದು ಎಂದು ಕೋರಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಮಾಜಿ ಸಿಎಂ ಸಿದ್ದರಾಮಯ್ಯ, ಮಾಜಿ ಸಚಿವ ಎಂ.ಬಿ.ಪಾಟೀಲ್ ಹಾಗೂ ಮುಂಬೈ ಕರ್ನಾಟಕ ಭಾಗದ ಕಾಂಗ್ರೆಸ್ ನಾಯಕರು ಪಾಲ್ಗೊಳ್ಳಲಿದ್ದಾರೆ. 'ಯಮಕನಮರಡಿ ಚುನಾವಣೆ ವೇಳೆ ರಾಹುಕಾಲದಲ್ಲಿ ನಾಮಪತ್ರ ಸಲ್ಲಿಸಿದ್ದೆ. ಕರಿ ದಿನವೆಂದರೆ ಇಡೀ ದಿನ ರಾಹುಕಾಲ ಇದ್ದಂತೆಯೇ. ಅದರಲ್ಲಿ ನನಗೆ ನಂಬಿಕೆ ಇಲ್ಲ. ಒಳ್ಳೆಯ ಕೆಲಸ ಮಾಡಿದರೆ ಒಳ್ಳೆಯದು. ಕೆಟ್ಟ ಕೆಲಸ ಮಾಡಿದರೆ ಕೆಟ್ಟ ಕಾಲವಷ್ಟೇ' ಎಂದು ಸತೀಶ ಜಾರಕಿಹೊಳಿ ಹೇಳಿದ್ದಾರೆ.

ಉಪ ಸಮರ

## ಅಂದು ಸಾಂಕೇತಿಕ, ಇಂದು ಅಧಿಕೃತ

**ರಾಯಚೂರು:** ಮಸ್ಕಿಯಲ್ಲಿ ಈಗಾಗಲೆ ಸಾಂಕೇತಿಕವಾಗಿ ಬಿಜೆಪಿಯ ಪ್ರತಾಪಗೌಡ ಪಾಟೀಲ್ ಮತ್ತು ಕಾಂಗ್ರೆಸ್‌ನ ಬಸನಗೌಡ ತುರ್ವಿಹಾಳ ನಾಮಪತ್ರ ಸಲ್ಲಿಸಿದ್ದಾರೆ. ನಾಯಕರ ಬೆಂಬಲದೊಂದಿಗೆ ಎರಡೂ ಪಕ್ಷಗಳ ಅಭ್ಯರ್ಥಿಗಳು ಸೋಮವಾರ ಮತ್ತೊಮ್ಮೆ ಉಮೇದುವಾರಿಕೆ ದಾಖಲಿಸಲಿದ್ದಾರೆ. ಪ್ರತಾಪಗೌಡರಿಗೆ ಬಿಜೆಪಿ ರಾಜ್ಯ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ, ಸಚಿವ ಶ್ರೀರಾಮುಲು ಮತ್ತು ತುರ್ವಿಹಾಳರಿಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಮಾಜಿ ಸಿಎಂ ಸಿದ್ದರಾಮಯ್ಯ ಸಾಥ್ ನೀಡಲಿದ್ದಾರೆ. ಕ್ಷೇತ್ರದಲ್ಲಿ ಬಿಜೆಪಿ-ಕಾಂಗ್ರೆಸ್ ನಡುವೆ ಸಮಬಲದ ಹೋರಾಟವಿದ್ದು, ಕಣದಲ್ಲಿ ಕುತೂಹಲವಿದೆ. ಕರೊನಾ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆ ಜನರನ್ನು ಸೇರಿಸದಂತೆ ಜಿಲ್ಲಾಡಳಿತ ಸೂಚಿಸಿದೆ. ಹೀಗಾಗಿ ನಾಮಪತ್ರ ಸಲ್ಲಿಕೆ ವೇಳೆ ಆಯೋಜಿಸಿದ್ದ ರ‍್ಯಾಲಿಯನ್ನು ಬಿಜೆಪಿ ಕೈಬಿಟ್ಟಿದೆ. ಕಾಂಗ್ರೆಸ್ ನಾಯಕರು ಸಮಾವೇಶ ಆಯೋಜಿಸದೆ, ತೆರೆದ ವಾಹನದಲ್ಲೇ ಮಾತನಾಡಲಿದ್ದಾರೆ. ಈ ಹಿಂದೆ ಸಿಎಂ ಬಂದಾಗ 30 ಸಾವಿರ ಜನರನ್ನು ಸೇರಿಸಿದ್ದಕ್ಕೆ ಸಮಾವೇಶದ ಆಯೋಜಕರಿಗೆ ಚುನಾವಣಾಧಿಕಾರಿ ನೋಟಿಸ್ ನೀಡಿದ್ದರು.

## ಸಂಸದರಿಗೆ ಅವಹೇಳನ 11 ಜನರ ವಿರುದ್ಧ ಕೇಸ್

**ಬೀದರ್:** ಬಸವಕಲ್ಯಾಣ ಉಪಚುನಾವಣೆಯಲ್ಲಿ ಬಿಜೆಪಿ ಟಿಕೆಟ್ ಅನ್ನು ಶರಣು ಸಲಗರ್ ಅವರಿಗೆ ಕೊಡಿಸುವ ಮೂಲಕ ಸಂಸದ ಭಗವಂತ ಖೂಬಾ ಮಾರಾಟ ಮಾಡಿದ್ದಾರೆ ಎಂದು ಕೆಲವರು ಜಾಲತಾಣದಲ್ಲಿ ಅವಾಚ್ಯ ಶಬ್ದ ಬಳಸಿ ಅವಹೇಳನ ಮಾಡಿದ್ದಾರೆ. ಈ ಸಂಬಂಧ ಬಿಜೆಪಿ ಯುವ ಮೋರ್ಚಾ ನಗರ ಅಧ್ಯಕ್ಷ ಅಂಬರೀಶ್ ಬಟ್ನಾಪುರೆ ನೀಡಿದ ದೂರಿನನ್ವಯ ದೀಪಕರೆಡ್ಡಿ ಕಮಲಾಪುರ ಸೇರಿ 11 ಜನರ ವಿರುದ್ಧ ಬೀದರ್‌ನ ನ್ಯೂ ಟೌನ್ ಠಾಣೆಯಲ್ಲಿ ಕೇಸ್ ದಾಖಲಾಗಿದೆ.